ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE 6/4/202

# ರಮೇಶ್ ಜಾರಕಿಹೊಳಿಗೆ ಕರೋನಾ ಪಾಸಿಟಿವ್ ಅಂತೆ

## ಕರೋನಾದಿಂದ ಗುಣಮುಖರಾದ ಮೇಲೆ ಚುನಾವಣಾ ಪ್ರಚಾರಕ್ಕೆ ಬರುತ್ತಾರೆ: ನಗರಾಭಿವೃದ್ಧಿ ಸಚಿವ ಭೈರತಿ ಬಸವರಾಜ್

ಬೆಳಗಾವಿ: ಮಾಜಿ ಸಚಿವ ರಮೇಶ್ ಜಾರಕಿಹೊಳಿಗೆ ಕರೋನಾ ಪಾಸಿಟಿವ್ ಆಗಿದೆ ಎಂದು ನಗರಾಭಿವೃದ್ಧಿ ಸಚಿವ ಭೈರತಿ ಬಸವರಾಜ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಅವರು ಹುಷಾರಾಗಿ ಬೆಳಗಾವಿ ಲೋಕಸಭಾ ಉಪಚುನಾವಣಾ ಪ್ರಚಾರಕ್ಕೆ ಬರೋದಾಗಿ ಹೇಳಿದ್ದಾರೆ. ರಮೇಶ್ ಜಾರಕಿಹೊಳಿ ಬೆಂಗಳೂರಿನಲ್ಲಿಯೇ ಇದ್ದಾರೆ ಎಂದರು. ಇನ್ನೆರಡು ದಿನಗಳಲ್ಲಿ ಬಾಲಚಂದ್ರ ಜಾರಕಿಹೊಳಿ ಪ್ರಚಾರಕ್ಕೆ ಬರುತ್ತಾರೆ. ಕೇವಲ ಚುನಾವಣಾ ಪ್ರಚಾರ ಕುರಿತು ರಮೇಶ್ ಜಾರಕಿಹೊಳಿ ಜತೆ ಚರ್ಚೆ ಮಾಡಲಾಗಿದೆ. ರಮೇಶ್, ಬಾಲಚಂದ್ರ ಜತೆ ನಿನ್ನೆ ಫೋನ್‌ನಲ್ಲಿ ಮಾತನಾಡಿದ್ದೇನೆ, ಇವತ್ತು ನಾನು, ನಮ್ಮೆಲ್ಲ ನಾಯಕರು ಗೋಕಾಕ, ಅರಬಾವಿಗೆ ಹೋಗುತ್ತಿದ್ದೇವೆ ಎಂದರು.

ಬೆಳಗಾವಿ ನಗರ ಅಭಿವೃದ್ಧಿಗೆ ಇತ್ತೀಚೆಗೆ 150 ಕೋಟಿ ರು. ಕೊಟ್ಟಿದ್ದೇವೆ. ಬೆಳಗಾವಿ ಜನತೆ ಅತಿಹೆಚ್ಚಿನ ಮತ ನೀಡಿ ಮಂಗಲಾ ಅಂಗಡಿರನ್ನು ಗೆಲ್ಲಿಸುತ್ತಾರೆ. ನಿನ್ನೆ ಕುರುಬ ಸಮುದಾಯದ ಮುಖಂಡರ ಜತೆ ಚರ್ಚಿಸಿದ್ದೇನೆ. ಮಸ್ಕಿ, ಬಸವಕಲ್ಯಾಣ, ಬೆಳಗಾವಿಯಲ್ಲಿ ಜಯಭೇರಿ ಬಾರಿಸುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ರಾಷ್ಟ್ರಪತಿ ಆಳ್ವಿಕೆಗೆ ಸಿದ್ದರಾಮಯ್ಯ ಆಗ್ರಹ ವಿಚಾರಕ್ಕೆ ಉತ್ತರಿಸಿದ ಅವರು, ಸಿದ್ದರಾಮಯ್ಯ ತಮ್ಮ ಪಕ್ಷದಲ್ಲಿ ಏನಾಗಿದೆ ಅದನ್ನು ನೋಡಿಕೊಳ್ಳಲಿ. ಕೋವಿಡ್ ಸಂದರ್ಭದಲ್ಲಿ ಸಿಎಂ ಬಿಎಸ್‌ವೈ ಅನೇಕ ಜನಪರ ಯೋಜನೆ ಕೊಟ್ಟಿದ್ದಾರೆ ಎಂದು ಸಿದ್ದರಾಮಯ್ಯನವರ ವಿರುದ್ಧ ವಾಗ್ದಾಳಿ ನಡೆಸಿದರು.



ಸಿಎಂ ಸೂಚನೆಯಂತೆ ಬೆಳಗಾವಿ ಚುನಾವಣೆ ಪ್ರಚಾರಕ್ಕೆ ಬಂದಿದ್ದೇನೆ. ಬಿಜೆಪಿ ಅಭ್ಯರ್ಥಿ ಮಂಗಲಾ ಅಂಗಡಿ ಜಯಸಾಧಿಸುವಲ್ಲಿ ಸಂದೇಹ ಇಲ್ಲ. ಸುರೇಶ್ ಅಂಗಡಿ ಜನಪರ ಕಾರ್ಯಕ್ರಮ ಮುಂದಿಟ್ಟು ಮತಯಾಚನೆ ಮಾಡುತ್ತೇವೆ. ಪ್ರಧಾನಿ ನರೇಂದ್ರ ಮೋದಿ ಜನಪರ ಕಾರ್ಯಗಳನ್ನು ಹೇಳಿ ಮತ ಕೇಳುತ್ತೇವೆ.

– ಭೈರತಿ ಬಸವರಾಜ್ ಸಚಿವ